ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಡಿಟಿಇ 01 ಇ-ಆಡಳಿತ 2019

ನಿರ್ದೇಶಕರವರ ಕಛೇರಿ
ಅರಮನೆ ರಸ್ತೆ, ಬೆಂಗಳೂರು
ದಿನಾಂಕ:09-07-2019

**<u>ಸುತ್ತೋಲೆ</u>**

ವಿಷಯ: SCSP/TSP ಫಲಾನುಭವಿಗಳ ಮಾಹಿತಿಯನ್ನು ಸಮಾಜ ಕಲ್ಯಾಣ ಇಲಾಖೆಯ ವೆಬ್ ಪೋರ್ಟಲ್ ನಲ್ಲಿ ಅಪ್ ಲೋಡ್ ಮಾಡುವ ಬಗ್ಗೆ

ಉಲ್ಲೇಖ: ಸಂ.ಸಕನಿ/ಪಜಾಉಯೋ -1 /ಸಿಆರ್ -91 / 2018-19,ದಿನಾಂಕ 15-05-2019

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖದ ಪತ್ರದಲ್ಲಿ ತಿಳಿಸಿರುವಂತೆ ಎಸ್‌ಸಿಎಸ್‌ಪಿ/ಟಿಎಸ್‌ಪಿ ಉಪಹಂಚಿಕೆಗಳಡಿ ಕಳೆದ 5 ವರ್ಷಗಳಲ್ಲಿ ಅನುಷ್ಠಾನ ಮಾಡಿದ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ವೈಯಕ್ತಿಕ ಸೌಲಭ್ಯ ಪಡೆದ ಫಲಾನುಭವಿಗಳ ವಿವರವನ್ನು ಅಪ್ ಲೋಡ್ ಮಾಡಲು ಸಮಾಜ ಕಲ್ಯಾಣ ಇಲಾಖೆಯು ತಂತ್ರಾಂಶವನ್ನು ಅಭಿವೃದ್ಧಿ ಮಾಡಿರುತ್ತದೆ. ಆದ್ದರಿಂದ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಗಳು ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2015 ರಿಂದ 2019 ವರೆಗೆ ಓದಿದ/ಓದುತ್ತಿರುವ ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳ (ಫಲಾನುಭವಿಗಳ) ಮಾಹಿತಿಯನ್ನು ಸಮಾಜ ಕಲ್ಯಾಣ ಇಲಾಖೆಯ webportal <u>https://sw.kar.nic.in/swscsp/scsplogin.aspx</u> ನಲ್ಲಿ ಅಪ್ ಲೋಡ್ ಮಾಡಲು ತಿಳಿಸಲಾಗಿದೆ. ಆದ್ದರಿಂದ 2015-2019ವರೆಗೆ ಇಲಾಖೆಯಡಿ ಬರುವ ಎಲ್ಲಾ ಎಸ್‌ಸಿಎಸ್‌ಪಿ/ಟಿಎಸ್‌ಪಿ ಫಲಾನುಭವಿಗಳ ಮಾಹಿತಿಯನ್ನು 20-07-2019 ರ ಒಳಗೆ ಮೇಲ್ಕಂಡ ಪೋರ್ಟಲ್ ನಲ್ಲಿ ಸಲ್ಲಿಸಲು ತಿಳಿಸಲಾಗಿದೆ. ಮಾಹಿತಿ ಸಲ್ಲಿಸಲು ಉನ್ನತ ಶಿಕ್ಷಣ ಇಲಾಖೆಯ ಜಿಲ್ಲಾವಾರು ಲಾಗಿನ್ ಮಾಹಿತಿಯನ್ನು ಪ್ರಾಂಶುಪಾಲರಿಗೆ ಇ-ಮೇಲ್ ಮುಖಾಂತರ ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗೆ ಫೋನ್ 080-22256780, ಇ-ಮೇಲ್ ವಿಳಾಸ dteupload@gmail ವನ್ನು ಸಂಪರ್ಕಿಸುವುದು.

ನಿರ್ದೇಶಕರು

ಗೆ

1. ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಗಳು ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರಿಗೆ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಸಿಡಿಸಿ ಮತ್ತು ಡಿವಿಪಿ,ನಿರ್ದೇಶನಾಲಯ, ತಾಶಿಇ
3. ಆಡಳಿತಾಧಿಕಾರಿಗಳು, ನಿರ್ದೇಶನಾಲಯ, ತಾಶಿಇ.
4. ನಿರ್ದೇಶಕರ ಆಪ್ತ ಶಾಖೆ